**ಪ್ರಧಾನ ಸಿವಿಲ್ ನ್ಯಾಯಾಧೀಶರ ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಹೆಗ್ಗಡದೇವನಕೋಟೆ, ಮೈಸೂರು ಜಿಲ್ಲೆ.**

**O.S. No. 197/2024**

**ಸಾಕ್ಷಿಯನ್ನು ದಿನಾಂಕಃ 03.07.2025 ರಂದು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ವಾದಿ ಪರ ಶ್ರೀ. ಎಸ್.ಎಸ್.ಬಿ. ವಕೀಲರಿಂದಃ**

ಈ ದಾವೆಯಲ್ಲಿ ನಾನು ವಾದಿಯಾಗಿರುತ್ತೇನೆ. ನನ್ನ ಮುಖ್ಯ ವಿಚಾರಣೆಯ ಬದಲಾಗಿ ಪ್ರಮಾಣ ಪತ್ರ ಸಲ್ಲಿಸಿದ್ದು, ಸದರಿ ಪ್ರಮಾಣ ಪತ್ರದಲ್ಲಿರುವ ಅಂಶಗಳನ್ನು ನಾನೇ ಖುದ್ದಾಗಿ ಬರೆಸಿರುತ್ತೇನೆ ಹಾಗೂ ಅದರಲ್ಲಿರುವ ಅಂಶಗಳು ಸತ್ಯವೆಂದು ಪ್ರಮಾಣಿಕರಿಸುತ್ತೇನೆ. ಅದರಲ್ಲಿರುವ ಸಹಿ ನನ್ನದೇ ಆಗಿರುತ್ತದೆ.

ನನ್ನ ದಾವೆ ಹಾಗು ಮಧ್ಯಂತರ ಜೊತೆ ಕೆಲವು ದಾಖಲೆಗಳನ್ನು ಹಾಜರುಪಡಿಸಿರುತ್ತೇನೆ. ದಿನಾಂಕಃ 20.05.2022 ರಂದು ನೋಂದಾಯಿತ ವಿಭಾಗ ಪತ್ರವನ್ನು ಹಾಜರುಪಡಿಸಿದ್ದು ಅದನ್ನು **ನಿ.ಪಿ.-1** ಎಂದು, 08 ಪಹಣಿ ಪತ್ರಿಕೆಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಕ್ರಮವಾಗಿ **ನಿ.ಪಿ.-2 ರಿಂದ ನಿ.ಪಿ.-9** ಎಂದು, ಆಕಾರ್ ಬಂದ್ ನ ಧೃಡೀಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು **ನಿ.ಪಿ.-10** ಎಂದು, ಮ್ಯುಟೇಷನ್ ರಿಜಿಸ್ಟರ್ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು **ನಿ.ಪಿ.**-11 ಎಂದು, ಋಣಭಾರ ರಾಹಿತ್ಯ ಪ್ರಮಾಣ ಪತ್ರವನ್ನು ಹಾಜರುಪಡಿಸಿದ್ದು ಅದನ್ನು **ನಿ.ಪಿ.-12** ಎಂದು, ಪಟ್ಟಾ ಹಾಗು ರಸೀದಿ ಪುಸ್ತಕವನ್ನು ಹಾಜರುಪಡಿಸಿದ್ದು ಅದನ್ನು **ನಿ.ಪಿ.-13** ಎಂದು, 01 ಕಂದಾಯ ರಸೀದಿಯನ್ನು ಹಾಜರುಪಡಿಸಿದ್ದು ಅದನ್ನು **ನಿ.ಪಿ.-14** ಎಂದು, ಮೊಕದ್ದಮೆ ಸಂಖ್ಯೆ: 138/2022 ರಲ್ಲಿನ ಪ್ರಥಮ ವರ್ತಮಾನ ವರದಿಯನ್ನು ಹಾಜರುಪಡಿಸಿದ್ದು ಅದನ್ನು **ನಿ.ಪಿ.-15** ಎಂದು ಗುರುತಿಸಲಾಯಿತು.

**ಪಾಟಿ ಸವಾಲು: 1, 3 ಮತ್ತು 4 ನೇ ಪ್ರತಿವಾದಿಗಳ ಪರ ವಕೀಲರು ಸಮಯಾವಕಾಶವನ್ನು ಕೋರಿದ್ದು, ಸಮಯಾವಕಾಶವನ್ನು ನೀಡಿ ಮುಂದೂಡಲಾಯಿತು.**

(**ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.**)

**ಓ ಹೇ ಕೇ ಸಾ ಸ ಇ ಒ.,**

**ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ.,**

**ಹೆಗ್ಗಡದೇವನಕೋಟೆ.**